# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719


ಸಂಖ್ಯೆ:ತುವಿ:ಶೈವಿ:2018-19: 3290 ದಿನಾಂಕ: 21.12.2018

## ಪರಿಷ್ಕೃತ ಅಧಿಸೂಚನೆ

ವಿಷಯ: 2018-19 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕೋತ್ತರ ಪದವಿ ಕೋರ್ಸುಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಪರಿಷ್ಕರಿಸುವ ಕುರಿತು.

ಉಲ್ಲೇಖ:1. ಅಧಿಸೂಚನೆ ಸಂಖ್ಯೆ:ತುವಿ:ಶೈವಿ:2018-19/583 ದಿನಾಂಕ:08.06.2018.
2. ಶೈಕ್ಷಣಿಕ ವೇಳಾಪಟ್ಟಿ ಸಮಿತಿಯ ಸಭೆಯ ದಿನಾಂಕ:19.12.2018
3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:21.12.2018 (ಕಂಡಿಕೆ- 77)

*****

2018-19 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕೋತ್ತರ ಪದವಿ ಕೋರ್ಸುಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ-01 ರಂತೆ ಈಗಾಗಲೇ ಅಧಿಸೂಚಿಸಲಾಗಿರುತ್ತದೆ. ಆದರೆ, ಶೈಕ್ಷಣಿಕ ವೇಳಾಪಟ್ಟಿಯಲ್ಲಿ ನಿಗದಿಯಾಗಿದ್ದ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್‌ಗಳ ಪರೀಕ್ಷೆಗಳ ದಿನಾಂಕಕ್ಕೂ ಹಾಗೂ ಪರೀಕ್ಷಾ ವಿಭಾಗದಿಂದ ಹೊರಡಿಸಲಾಗಿರುವ ಸದರಿ ಸೆಮಿಸ್ಟರ್‌ಗಳ ಪರೀಕ್ಷಾ ದಿನಾಂಕಕ್ಕೆ ವ್ಯತ್ಯಾಸವಿರುತ್ತದೆ.

ಈ ಹಿನ್ನೆಲೆಯಲ್ಲಿ, ದ್ವಿತೀಯ ಹಾಗೂ ನಾಲ್ಕನೇ ಸೆಮಿಸ್ಟರ್ ತರಗತಿಗಳ ಪುನರಾರಂಭ ದಿನಾಂಕಗಳಲ್ಲಿ ವ್ಯತ್ಯಾಸವಾಗುವುದರಿಂದ ಮಾನ್ಯ ಕುಲಪತಿಯವರ ಅನುಮೋದನೆ ಮೇರೆಗೆ ದಿನಾಂಕ:19.12.2018 ರಂದು ಶೈಕ್ಷಣಿಕ ವೇಳಾಪಟ್ಟಿ ಸಮಿತಿಯು ಸಭೆಯನ್ನು ನಡೆಸಿ ಶೈಕ್ಷಣಿಕ ವೇಳಾಪಟ್ಟಿಯನ್ನು ಪರಿಷ್ಕರಿಸಿ ಸಲ್ಲಿಸಿರುತ್ತದೆ.

ಈ ಸಂಬಂಧವಾಗಿ ಉಲ್ಲೇಖ-03 ರ ಮಾನ್ಯ ಕುಲಪತಿಯವರ ಅನುಮೋದನೆಯನ್ವಯ 2018-19 ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ ಕೋರ್ಸುಗಳ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಪರಿಷ್ಕರಿಸಿ ಅಧಿಸೂಚಿಸಲಾಗಿದ್ದು, ಉಳಿದಂತೆ ಉಲ್ಲೇಖ (1) ರ ಅಧಿಸೂಚನೆಯಲ್ಲಿ ಇನ್ನಾವುದೇ ಬದಲಾವಣೆಗಳು ಇರುವುದಿಲ್ಲ.

| ಕ್ರಮ ಸಂಖ್ಯೆ | ಶೈಕ್ಷಣಿಕ ವೇಳಾಪಟ್ಟಿ | ಈ ಹಿಂದೆ ನಿಗದಿಯಾಗಿದ್ದ ದಿನಾಂಕ | ಪರಿಷ್ಕೃತ ದಿನಾಂಕ |
|---|---|---|---|
| 1. | II & IVನೇ ಸೆಮಿಸ್ಟರ್‌ನ ತರಗತಿಗಳು ಪುನರಾರಂಭ | 01.01.2019 | 10.01.2019 |
| 2. | II & IVನೇ ಸೆಮಿಸ್ಟರ್‌ನ ತರಗತಿಗಳು ಮುಕ್ತಾಯ | 30.04.2019 | 09.05.2019 |
| 3. | ಸೈದ್ಧಾಂತಿಕ ಪರೀಕ್ಷೆಗಳು ಪ್ರಾರಂಭ | 07.05.2019 | 13.05.2019 |
| 4. | ಅಧ್ಯಾಪಕರುಗಳಿಗೆ ರಜಾ ಅವಧಿ | 06.05.2019 ರಿಂದ 30.06.2019 | 10.05.2019 ರಿಂದ 04.07.2019 |
| 5. | ಮೌಲ್ಯಮಾಪನ ಪ್ರಾರಂಭ | 15.05.2019 | 20.05.2019 |
| 6. | ಫಲಿತಾಂಶಗಳ ಪ್ರಕಟಣೆ | 15.06.2019 | 20.06.2019 |
| 7. | ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು / ಕಾಲೇಜುಗಳು ಪುನರಾರಂಭ | 01.07.2019 | 05.07.2019 |
| 8. | ಮುಂದಿನ ಶೈಕ್ಷಣಿಕ ಸಾಲಿನ IIIನೇ ಸೆಮಿಸ್ಟರ್ ತರಗತಿಗಳ ಪುನರಾರಂಭ | 11.07.2019 | 05.07.2019 |

21/12

ಕುಲಸಚಿವರು

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ವ್ಯಾಪ್ತಿಯ ಘಟಕ ಹಾಗೂ ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.